ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಬೀದರ್ ಜಿಲ್ಲೆಯಲ್ಲಿ ಮೃತಪಟ್ಟ ಹಾಗೂ ಅಪಘಾತಕ್ಕೀಡಾದ ಜಾನುವಾರುಗಳಿಗೆ ಪರಿಹಾರ ನೀಡುವ ಕುರಿತು

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

486(274) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2016ರಿಂದ ಇಲ್ಲಿಯವರೆಗೆ ಬೀದರ್ ಜಿಲ್ಲೆಯಲ್ಲಿ ಸಾವನ್ನಪ್ಪಿರುವ ಜಾನುವಾರುಗಳ ಸಂಖ್ಯೆ ಎಷ್ಟು; ಇಲ್ಲಿಯವರೆಗೆ ಮೃತಪಟ್ಟ ಎಷ್ಟು ಜಾನುವಾರುಗಳಿಗೆ ಪರಿಹಾರ ನೀಡಲಾಗಿದೆ; ಜಾನುವಾರು ಮೃತಪಟ್ಟು ವರ್ಷವಾದರೂ ರೈತರಿಗೆ ಪರಿಹಾರ ನೀಡಲು ಆಗಿರುವ ವಿಳಂಬಕ್ಕೆ ಕಾರಣವೇನು ; (ವರ್ಷಾವಾರು ವಿವರ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ಜಾನುವಾರುಗಳಿಗೆ ಚಿಕಿತ್ಸೆ ನೀಡಲು ಇರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಪೈಕಿ ಸ್ವಂತ ಕಟ್ಟಡ ಹಾಗೂ ಖಾಸಗಿ ಕಟ್ಟಡಗಳಲ್ಲಿ ಇರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಸ್ವಂತ ಕಟ್ಟಡ ನಿರ್ಮಾಣಕ್ಕೆ ಸರಕಾರ ಯಾವ ಕ್ರಮಕೈಗೊಂಡಿದೆ ;

(ಈ) ಪಶು ಸಂಗೋಪನ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕೈಗೊಂಡಿರುವ ಕ್ರಮವೇನು ; (ತಾಲ್ಲೂಕುವಾರು ಹುದ್ದೆವಾರು ವಿವರ ನೀಡುವುದು)

(ಉ) ಬೀದರ್ ಜಿಲ್ಲೆಯಿಂದ ಅಂಬುಲೆನ್ಸ್ ಸೇವೆಗೆ 1962ಗೆ ಬಂದಿರುವ ಕರೆಗಳು ಎಷ್ಟು; ತುರ್ತು ಚಿಕಿತ್ಸೆಗಾಗಿ ಎಷ್ಟು ಬಾರಿ ಅಂಬುಲೆನ್ಸ್ ಬಳಸಲಾಗಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)